© Ph / Fax : 27682035

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 10, 1ನೇ ಮಹಡಿ, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562 110, ವೆಬ್‌ಸೈಟ್: www.biaapa.in

## ಪ್ರಾರಂಭಿಕ ಪ್ರಮಾಣ ಪತ್ರ

*(ನಮೂನೆ-3)*

**ಸಂ:ಬಿಐಎಪಿಎ/ಟಿಪಿ/ಎಲ್‌ಎಒ/43/2008-09** *ದಿನಾಂಕ:* ***18-07-2009***

ಉಲ್ಲೇಖ: 1) ನಿಮ್ಮ ಅರ್ಜಿ ಸಂಖ್ಯೆ 1600 ದಿ: 13-10-2008 ಮತ್ತು ಮನವಿ ಪತ್ರ ದಿ:16-07-2009 ಹಾಗೂ ಶುಲ್ಕಗಳನ್ನು ಪಾವತಿಸಿದ ದಿನಾಂಕ: 06-07-2009 ಮತ್ತು ಪರಿತ್ಯಜನಾ ಪತ್ರ ಸಂ. HSR-1-00653-2009-10 ದಿ: 14-07-2009

2) ಸರ್ಕಾರಿ ಅಧಿಸೂಚನೆ ಸಂ. ನಅಇ/157/ಬೆಂರೂಪ್ರಾ/2005 ದಿನಾಂಕ : 27-01-2009

3) ದಿನಾಂಕ: 25-05-2009 ರಂದು ನಡೆದ ಪ್ರಾಧಿಕಾರದ 53ನೇ ಸಭೆಯ ಹೆಚ್ಚುವರಿ ವಿಷಯ ಸಂ: 11 (vi) ರ ಬಗ್ಗೆ ತೆಗೆದುಕೊಂಡ ನಿರ್ಣಯ.

************

### ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ ಪ್ರಕರಣ 17ರಡಿಯಲ್ಲಿ

ಶ್ರೀ. ರವಿ ಪುರವಾಂಕರ, ಮೆ: ಪುರವಾಂಕರ ಕನ್ಸ್ಟ್ರಕ್ಷನ್ಸ್, ಇವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಕಡತನಮಲೆ ಗ್ರಾಮದ ಸರ್ವೆ ನಂ. 30 ರಲ್ಲಿ (7ಎ-24½ ಗು), 31 (6ಎ-25½ಗು), 32 (9ಎ-02ಗು), 33 (9ಎ-37¼ಗು), 34 (6ಎ-½ಗು), 161 (2ಎ) ಒಟ್ಟು 41ಎಕರೆ 9¾ ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ಗ್ರೂಫ್ ಹೌಸಿಂಗ್ ರ ಅಡಿಯಲ್ಲಿ ಅಭಿವೃದ್ಧಿ ನಕ್ಷೆ ಅನುಮೋದನೆಗಾಗಿ ಸಲ್ಲಿಸಿರುವ ಅರ್ಜಿಯನ್ನು ಪರಿಶೀಲಿಸಲಾಗಿ, ಉಲ್ಲೇಖ (1) ರಂತೆ ಅಭಿವೃದ್ಧಿ ನಕ್ಷೆಯಲ್ಲಿ ಉದ್ಯಾನವನ/ಬಯಲುಜಾಗ, ನಾಗರೀಕ ಸೌಲಭ್ಯ ಮತ್ತು ರಸ್ತೆಗಾಗಿ ಮೀಸಲಿಟ್ಟ ಜಾಗಗಳನ್ನು ಪರಿತ್ಯಜನಾ ಪತ್ರದ ಮುಖಾಂತರ ಸದಸ್ಯ ಕಾರ್ಯದರ್ಶಿಗಳು, ಬಿಐಎಪಿಎ ಇವರಿಗೆ ನೊಂದಾಯಿಸಿರುತ್ತಾರೆ. ಉಲ್ಲೇಖ (2) ರ ಸರ್ಕಾರಿ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27-01-2009 ರಲ್ಲಿನ ನಿರ್ದೇಶನದಂತೆ ಹಾಗೂ ಉಲ್ಲೇಖ (3) ರ ದಿನಾಂಕ: 25-05-2009 ರಂದು ನಡೆದ 53 ನೇ ಸಭೆಯ ಹೆಚ್ಚುವರಿ ವಿಷಯ ಸಂ : 11 (vi) ರ ಬಗ್ಗೆ ತೆಗೆದುಕೊಂಡ ನಿರ್ಣಯದಂತೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಗ್ರೂಫ್ ಹೌಸಿಂಗ್ ರ ಅಡಿಯಲ್ಲಿ ಅಭಿವೃದ್ಧಿ ನಕ್ಷೆಯನ್ನು ಅನುಮೋದಿಸಲಾಗಿದೆ.

1. ಈಗ ನೀಡಿರುವ ಅಭಿವೃದ್ಧಿ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸದ ಅಭಿವೃದ್ಧಿ ಪೂರ್ಣಗೊಳ್ಳದಿದ್ದಲ್ಲಿ ಅಭಿವೃದ್ಧಿ ನಕ್ಷೆಯ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2. ಅಭಿವೃದ್ಧಿ ನಕ್ಷೆಯಲ್ಲಿನ ಪ್ರದೇಶವನ್ನು ಈ ಪ್ರಾಧಿಕಾರದ ಅನುಮೋದನೆ ನೀಡಿದ 24 ತಿಂಗಳ ಒಳಗಾಗಿ ಸಂಪೂರ್ಣವಾಗಿ (ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕ) ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ ನಅಇ:112:ಬೆಂರೂಪ್ರಾ:2005 ದಿ: 26-05-2005 ರಂತೆ ಮುಂದಿನ ಕ್ರಮ ಜರುಗಿಸಲಾಗುವುದು.
3. ಪ್ರಸ್ತಾವಿತ ಅಭಿವೃದ್ಧಿ ನಕ್ಷೆಯಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯಲ್ಲಿ ಸೀವೇಜ್ ಟ್ರೀಟ್‌ಮೆಂಟ್‌ಪ್ಲಾಂಟ್‌ನ್ನು ಸ್ಥಾಪಿಸಬೇಕು ಮತ್ತು ಕಟ್ಟಡ ನಿರ್ಮಾಣ ಪ್ರಯುಕ್ತ ಕರ್ನಾಟಕ ರಾಜ್ಯಮಾಲಿನ್ಯ ನಿಯಂತ್ರಣ ಮಂಡಳಿಯ ಸಂ. PCB/498/CNP/08 ರಲ್ಲಿ ವಿಧಿಸಲಾದ ಎಲ್ಲಾ ಷರತ್ತುಗಳನ್ನು ತಪ್ಪದೆ ಅನುಸರಿಸತಕ್ಕದ್ದು ಹಾಗೂ ಪ್ರಾಧಿಕಾರದಿಂದ ಅದರಂತೆ ನಿಯಾಮನುಸಾರ ಕಟ್ಟಡ ನಕ್ಷೆಗೆ ಅನುಮೋದನೆಯನ್ನು ಪಡೆಯತಕ್ಕದ್ದು.
4. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಅಭಿವೃದ್ಧಿ ನಕ್ಷೆಯಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
5. ಈ ಪ್ರಸ್ತಾವಿತ ಪ್ರದೇಶದಲ್ಲಿ ಬರುವ ಖರಾಬು ಜಮೀನುಗಳನ್ನು ಯಥಾ ಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸ್ಯಗಳನ್ನು ಬೆಳೆಸುವುದು.
6. ಅನುಮೋದಿತ ಅಭಿವೃದ್ಧಿ ನಕ್ಷೆಯ ಪ್ರದೇಶದಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ಅಭಿವೃದ್ಧಿ ನಕ್ಷೆಯಲ್ಲಿ ಅಂತರ್ ಜಲ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
7. ಅನುಮೋದಿತ ಅಭಿವೃದ್ಧಿ ನಕ್ಷೆಯಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು, ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿರುವ ಪ್ರದೇಶಗಳನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.
8. ಅಭಿವೃದ್ಧಿ ನಕ್ಷೆಯಲ್ಲಿನ ರಸ್ತೆಗಳಿಂದ ಅಕ್ಕಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂದಿಸತಕ್ಕದ್ದಲ್ಲ.

9. ಅಭಿವೃದ್ಧಿ ನಕ್ಷೆಯನ್ನು ಜಂಟಿಯಾಗಿ ಅಭಿವೃದ್ಧಿಪಡಿಸುವಾಗ ಉದ್ಯಾನವನ, ನಾಗರೀಕ ಸೌಲಭ್ಯ ಹಾಗೂ ರಸ್ತೆಗಾಗಿ ಕಾಯ್ದಿರಿಸುವ ಜಾಗಗಳನ್ನು ಅನುಮೋದಿತ ಅಭಿವೃದ್ಧಿ ನಕ್ಷೆಯಂತೆಯೇ ಅಭಿವೃದ್ಧಿ ಪಡಿಸಬೇಕು.

10. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ, ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.

11. ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

12. ಅಭಿವೃದ್ಧಿ ನಕ್ಷೆ ಅಂಗೀಕಾರ ಕೋರಿಕೆ ಸಂಬಂಧ ತಮ್ಮಿಂದ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ಸುಳ್ಳಾಗಿದ್ದಲ್ಲಿ ಅಥವಾ ಫೋರ್ಜರಿಯಾಗಿದ್ದಲ್ಲಿ ಅಭಿವೃದ್ಧಿ ನಕ್ಷೆಗೆ ನೀಡಿರುವ ಅಂಗೀಕಾರ ತಾನೇ ತಾನಾಗಿ ರದ್ದುಗೊಳ್ಳುತ್ತದೆ.

13. ಈ ಅಭಿವೃದ್ಧಿ ನಕ್ಷೆಯಲ್ಲಿ ಬರುವ ಕಟ್ಟಡಗಳಿಗೆ ನಿಯಮಾನುಸಾರ ಅನುಮೋದನೆ ಪಡೆದ ನಂತರ ಇದರ ಮಾರಾಟ ಸಂಬಂಧ ನೀಡುವ ಪ್ರಚಾರದಲ್ಲಿ ಪ್ರಾಧಿಕಾರದಿಂದ ಅನುಮೋದನೆ ಆಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

14. ರಸ್ತೆ ಬದಿಯಲ್ಲಿ ಪಾದಚಾರಿಗಳು ಓಡಾಡಲು ಅನುಕೂಲವಾಗುವಂತೆ ಸೂಕ್ತವಾಗಿ ಪಾದಚಾರಿ ಮಾರ್ಗವನ್ನು (Paved Footpath) ನಿರ್ಮಿಸುವುದು.

15. ನೀರು ಸರಬರಾಜು ವ್ಯವಸ್ಥೆ ಬಗ್ಗೆ ಸರ್ಕಾರವು ಮುಂದೆ ವಿಧಿಸುವ ಯಾವುದೇ ಹೆಚ್ಚಿನ ಶುಲ್ಕಗಳನ್ನು ಅಭಿವೃದ್ಧಿದಾರರೇ ಭರಿಸಲು ಬದ್ಧರಾಗಿರಬೇಕು.

16. ಅಭಿವೃದ್ಧಿ ನಕ್ಷೆಯಲ್ಲಿನ ನೀರಿನ ಪೂರೈಕೆಗೆ ಅನುಗುಣವಾಗಿ ಅಗತ್ಯ ಮೇಲ್ಮಟ್ಟದ ನೀರಿನ ಟ್ಯಾಂಕ್ (Over Head Tank) ಅನ್ನು ಕಡ್ಡಾಯವಾಗಿ ಅಳವಡಿಸುವುದು.

17. ನೀರು ಸರಬರಾಜು ವ್ಯವಸ್ಥೆಯ ಬಗ್ಗೆ ಆಗುವ ಅನಾನೂಕುಲಗಳ ಬಗ್ಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಈ ಕೆಳಗಿನ ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 17(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

18/02/09

*ಸದಸ್ಯ-ಕಾರ್ಯದರ್ಶಿ,*

ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಯಥಾಪ್ರತಿಯನ್ನು:-*

1) ಶ್ರೀ ರವಿ ಪುರವಾಂಕರ, ಮೆ: ಪುರವಾಂಕರ ಕನ್ಸ್ಟ್ರಕ್ಷನ್ಸ್, ನಂ. 130/1, ಹಲಸೂರು ರಸ್ತೆ, ಬೆಂಗಳೂರು ಇವರ ಮಾಹಿತಿಗಾಗಿ

2) ಕಾರ್ಯದರ್ಶಿಗಳು, ರಾಜಾನುಕುಂಟೆ ಗ್ರಾಮ ಪಂಚಾಯಿತಿ, ಹೆಸರಘಟ್ಟ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು ಇವರಿಗೆ ಅನುಮೋದಿತ ಅಭಿವೃದ್ಧಿ ನಕ್ಷೆಯ 4 ಪ್ರತಿಗಳನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

3) ಉಪನೋಂದನಾಧಿಕಾರಿಗಳು, ಹೆಸರಘಟ್ಟ ಉಪನೋಂದಣಿ ಕಚೇರಿ, ಹೆಸರಘಟ್ಟ, ಬೆಂಗಳೂರು ಉತ್ತರ ತಾಲ್ಲೂಕು ರವರ ಮಾಹಿತಿಗಾಗಿ.

4) ಕಚೇರಿ ಕಡತಕ್ಕೆ

ಉಪನೋಂದಣಾಧಿಕಾರಿ 24/02/05.
ಹೆಸರುಘಟ್ಟ